ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕೋವಿಡ್-19 ವ್ಯಾಕ್ಸಿನ್ ಕುರಿತು

ಶ್ರೀ ಅರಣ ಶಹಾಪುರ (ಶಿಕ್ಷಕರ ಕ್ಷೇತ್ರ):-

511(678) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಈವರೆಗೂ ಒಟ್ಟು ಎಷ್ಟು ಕೋವಿಡ್ ಪ್ರಕರಣಗಳು ಪತ್ತೆಯಾಗಿವೆ; ಗುಣಮುಖವಾದ ಪ್ರಕರಣಗಳ ಸಂಖ್ಯೆ ಎಷ್ಟು ಕೋವಿಡ್-19 ಸಮಸ್ಯೆಯಿಂದಾಗಿ ಮೃತಪಟ್ಟವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೋವಿಡ್-19 ಸಮಸ್ಯೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಈಗಾಗಲೇ ತೆಗೆದುಕೊಂಡ ಕ್ರಮಗಳೇನು;

(ಇ) ಈವರೆಗೂ ಕೋವಿಡ್-19 ಸಮಸ್ಯೆಯಿಂದಾಗಿ ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಾಗೂ ಈ ಸಮಸ್ಯೆಯಿಂದಾಗಿ ಒಟ್ಟು ಖರ್ಚಾದ ಹಣ ಎಷ್ಟು ಕೇಂದ್ರ ಸರ್ಕಾರದಿಂದ ಬಂದ ಹಣ ಎಷ್ಟು;

(ಈ) ವ್ಯಾಕ್ಸಿನ್ ತಯಾರಿಕೆ ಕುರಿತು ಕೇಂದ್ರ ಸರ್ಕಾರದಿಂದ ಯಾವುದಾದರೂ ಮಾಹಿತಿ ಬಂದಿದೆಯೇ; ಮಾಹಿತಿಯನ್ನು ಆಧರಿಸಿ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮಗಳೇನು;

(ಉ) ವ್ಯಾಕ್ಸಿನ್ ಅನ್ನು ಜನತೆಗೆ ಒದಗಿಸುವ ಕುರಿತು ಸರ್ಕಾರದ ಕ್ರಮಗಳೇನು; ಅದರ ಪೂರ್ವ ತಯಾರಿ ಹೇಗಿದೆ; (ಮಾಹಿತಿ ಒದಗಿಸುವುದು)

(ಊ) ಈ ವ್ಯಾಕ್ಸಿನ್ ಅನ್ನು ವಿತರಿಸಲು ಯಾವ ಯಾವ ಸಿಬ್ಬಂದಿಗಳನ್ನು ಬಳಸಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆ?